**1 ನೇ ಹೆಚ್ಚುವರಿ ಜಿಲ್ಲಾ ಮತ್ತು ವಿಶೇಷ ಸತ್ರ ನ್ಯಾಯಾಲಯ,**
ಚಿಕ್ಕಮಗಳೂರು

**ಸ್ಪೆಷಲ್ ಮೊಕದ್ದಮೆ ನಂಃ 74/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಪುರುಷೋತ್ತಮ.ಎನ್. | ಪಿಡಬ್ಲ್ಯೂ- 07 |
| ತಂದೆಯ ಹೆಸರು | - | ನಂಜುಂಡಪ್ಪ | ಸಿಡಬ್ಲ್ಯೂ - 16 |
| ವಯಸ್ಸು | - | 54 ವರ್ಷ | |
| ಉದ್ಯೋಗ | - | ಪೊಲೀಸ್ ಉಪಾಧೀಕ್ಷಕರು, ಸಿ.ಐ.ಡಿ. | |
| ವಾಸ ಸ್ಥಳ | - | ಬೆಂಗಳೂರು | |

*(*ಸಾಕ್ಷಿಯು ಈ ದಿನ ***Google meet*** ನಲ್ಲಿ ವಿಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಹೇಳಿಕೆಯನ್ನು ನೀಡಲು ಹಾಜರಾಗಿರುತ್ತಾರೆ. ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸಾಕ್ಷ್ಯವನ್ನು ದಾಖಲಿಸುವ ಮೊದಲು, ಧ್ವನಿಯು ಸ್ಪಷ್ಟವಾಗಿ ಕೇಳಿಸುತ್ತಿದೆ ಎಂಬುದನ್ನು ಹಾಗೂ ಸಾಕ್ಷ್ಯ ದಾಖಲೀಕರಣದಲ್ಲಿ ಯಾವುದೇ ತಾಂತ್ರಿಕ ದೋಷವಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಲಾಗಿದೆ**).**

ದಿನಾಂಕಃ 29-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದಃ

1. ದಿಃ 04-07-2022 ರಿಂದ 30-08-2023 ರವರೆಗೆ ನಾನು ಚಿಕ್ಕಮಗಳೂರು ಉಪ ವಿಭಾಗದ ಉಪಾಧೀಕ್ಷಕನಾಗಿ ಕಾರ್ಯ ನಿರ್ವಹಿಸಿದ್ದೇನೆ.

2. ಈ ಪ್ರಕರಣದ ತನಿಖೆಯನ್ನು ನಡೆಸಲು ಚಿಕ್ಕಮಗಳೂರು ಪೊಲೀಸ್ ವರಿಷ್ಠಾಧಿಕಾರಿಗಳು ದಿಃ 22-12-2022 ರಂದು ನನಗೆ ಆದೇಶಿಸಿರುತ್ತಾರೆ. ಸದರಿ ಆದೇಶವನ್ನು ಈಗ ನೋಡುತ್ತಿದ್ದು,

ಅದನ್ನು ನಿಪಿ.8 ಎಂದು ಗುರುತಿಸಲಾಯಿತು. ಈ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ.15 ರವರಿಂದ ಪಡೆದುಕೊಂಡಿರುತ್ತೇನೆ.

3. ಅದೇ ದಿನ ಘಟನಾ ಸ್ಥಳಕ್ಕೆ ಭೇಟಿ ನೀಡಿ ಫಿರ್ಯಾದಿ ತೋರಿಸಿದ ಸ್ಥಳದಲ್ಲಿ ಚಾಸಾ.2 ಮತ್ತು ಚಾಸಾ.3 ರವರ ಸಮಕ್ಷಮ ನಿಪಿ.2 ರಂತೆ ಪಂಚನಾಮೆ ಮಾಡಿ ನಿಪಿ.3 ರಂತೆ ಫೋಟೋ ತೆಗೆಸಿರುತ್ತೇನೆ. ನಿಪಿ.2 ರಲ್ಲಿರುವ ನನ್ನ ಸಹಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಸ್ಥಳದಲ್ಲಿ ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಸದರಿ ಕಚ್ಚಾ ನಕಾಶೆಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು.

4. ಸದರಿ ಸಮಯದಲ್ಲಿ ಚಾಸಾ.1 ರವರು ಹಾಜರುಪಡಿಸಿದ ಕಾಡು ಜಾತಿಯ ದೊಣ್ಣೆಯನ್ನು ಜಪ್ತು ಮಾಡಿಕೊಂಡಿರುತ್ತೇನೆ. ಸದರಿ ದೊಣ್ಣೆಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ಮು.ಮಾ.1 ಎಂದು ಗುರುತಿಸಲಾಗಿರುತ್ತದೆ. ಸದರಿ ಮುದ್ದೆಮಾಲನ್ನು ಮಾಲುಪಟ್ಟಿಗೆ ಅಳವಡಿಸಿಕೊಂಡಿರುತ್ತೇನೆ. ಸದರಿ ಮಾಲುಪಟ್ಟಿಯನ್ನು ನಿಪಿ.9 ಎಂದು ಗುರುತಿಸಲಾಯಿತು.

5. ಅದೇ ದಿನ ಸ್ಥಳದ ದಾಖಲಾತಿಯನ್ನು ನೀಡುವಂತೆ ಪಿಡಿಒ ರವರಿಗೆ ಪತ್ರವನ್ನು ಬರೆದಿರುತ್ತೇನೆ. ಸದರಿ ಪತ್ರವನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.10 ಎಂದು ಗುರುತಿಸಲಾಯಿತು.

ಸದರಿಯವರು ನೀಡಿದ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.11 ಎಂದು ಗುರುತಿಸಲಾಯಿತು.

6. ಅದೇ ರೀತಿ ಘಟನಾ ಸ್ಥಳ ಮತ್ತು ಸಮಯದಲ್ಲಿ ವಿದ್ಯುತ್ ಸರಬರಾಜು ಇದ್ದ ಬಗ್ಗೆ ವರದಿಯನ್ನು ನೀಡುವಂತೆ ಪತ್ರವನ್ನು ಬರೆದಿರುತ್ತೇನೆ. ಸದರಿ ಪತ್ರವನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.12 ಎಂದು ಗುರುತಿಸಲಾಯಿತು. ಸದರಿಯವರು ನೀಡಿದ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.13 ಎಂದು ಗುರುತಿಸಲಾಯಿತು.

7. ಅದೇ ದಿನ ಸ್ಥಳದ ನಕಾಶೆಯನ್ನು ನೀಡುವಂತೆ ಲೋಕೋಪಯೋಗಿ ಇಲಾಖೆಗೆ ಪತ್ರವನ್ನು ಬರೆದಿರುತ್ತೇನೆ. ಸದರಿ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ.14 ಎಂದು ಗುರುತಿಸಲಾಯಿತು. ಸದರಿಯವರು ಪತ್ರದೊಂದಿಗೆ ನೀಡಿದ ನಕ್ಷೆಯನ್ನು ಈಗ ನೋಡುತ್ತಿದ್ದು, ಅವುಗಳನ್ನು ಕ್ರಮವಾಗಿ ನಿಪಿ.15 ಮತ್ತು ಪಿ.16 ಎಂದು ಗುರುತಿಸಲಾಯಿತು.

8. ಅದೇ ದಿನ ಜಾತಿ ದೃಢೀಕರಣ ಪತ್ರವನ್ನು ನೀಡುವಂತೆ ಪತ್ರವನ್ನು ಬರೆದಿರುತ್ತೇನೆ. ಸದರಿ ಪತ್ರವನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.17 ಎಂದು ಗುರುತಿಸಲಾಯಿತು. ಸದರಿಯವರು ನೀಡಿದ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.18 ಎಂದು ಗುರುತಿಸಲಾಯಿತು.

9. ಗಾಯದ ಪ್ರಮಾಣಪತ್ರವನ್ನು ನೀಡುವಂತೆ ವೈದ್ಯರಿಗೆ ಪತ್ರವನ್ನು ಬರೆದಿರುತ್ತೇನೆ. ಸದರಿ ಪತ್ರವನ್ನು ಈಗ ನೋಡುತ್ತಿದ್ದು,

ಅದನ್ನು ನಿಪಿ.19 ಎಂದು ಗುರುತಿಸಲಾಯಿತು. ಸದರಿಯವರು ನೀಡಿದ ಗಾಯದ ಪ್ರಮಾಣಪತ್ರವನ್ನು ಮತ್ತು ಎಂ.ಎಲ್.ಸಿ ನಕಲನ್ನು ಈಗ ನೋಡುತ್ತಿದ್ದು ಅವುಗಳನ್ನು ಈಗಾಗಲೇ ನಿಪಿ.5 ಎಂದು ಮತ್ತು ನಿಪಿ.6 ಎಂದು ಗುರುತಿಸಲಾಗಿದೆ.

10. ಫೋಟೋಗಳನ್ನು ತೆಗೆದ ಕುರಿತು ಸಿಬ್ಬಂದಿಯಿಂದ ಡಿವಿಡಿ ಮತ್ತು ಕಲಂ 65(ಬಿ) ರಡಿಯಲ್ಲಿ ದೃಢೀಕರಣ ಪತ್ರವನ್ನು ನೀಡಿರುತ್ತಾರೆ. ಸದರಿ ದೃಢೀಕರಣ ಪತ್ರವನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.20 ಎಂದು ಗುರುತಿಸಲಾಯಿತು. ಡಿವಿಡಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ.21 ಎಂದು ಗುರುತಿಸಲಾಯಿತು.

11. ಚಾಸಾ.1 ರವರ ಮರು ಹೇಳಿಕೆ ಮತ್ತು ಚಾಸಾ.4 ಮತ್ತು ಚಾಸಾ.5 ರವರ ಹೇಳಿಕೆಗಳನ್ನು ದಾಖಲಿಸಿಕೊಂಡಿರುತ್ತೇನೆ.

12. ಆರೋಪಿ ನ್ಯಾಯಾಲಯದಿಂದ ಜಾಮೀನು ಪಡೆದು ನನ್ನ ಮುಂದೆ ಹಾಜರಾಗಿದ್ದು, ಆತನನ್ನು ದಸ್ತಗಿರಿ ಮಾಡಿ ಬಿಡುಗಡೆ ಮಾಡಿರುತ್ತೇನೆ.

13. ತನಿಖೆ ಪೂರ್ಣಗೊಂಡಿದ್ದರಿಂದ ಜಿಲ್ಲಾ ವರಿಷ್ಟಾಧಿಕಾರಿಯವರ ಆದೇಶದ ಮೇರೆಗೆ ಆರೋಪಿತನ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ನಾನು ದಸ್ತಗಿರಿ ಮಾಡಿ ಬಿಡುಗಡೆ ಮಾಡಿದ ಆರೋಪಿ ಈ ದಿನ ನ್ಯಾಯಾಲಯದ ಮುಂದಿರುತ್ತಾರೆ.

<u>ಪಾಟೀ ಸವಾಲುಃ ಆರೋಪಿತನ ಪರವಾಗಿ ಶ್ರೀ ಡಿ.ಸಿ.ಪಿ ವಕೀಲರಿಂದ –</u>

14. ನಾನು ಯಾವುದೇ ಸ್ಥಳಕ್ಕೆ ಹೋಗಿರುವುದಿಲ್ಲ ಮತ್ತು ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ಫೋಟೋ ತೆಗೆಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ಜಪ್ತು ಮಾಡಿರುವುದಿಲ್ಲ ಮತ್ತು ಯಾವುದೇ ಇಲಾಖೆಗೆ ಪತ್ರ ಬರೆದಿರುವುದಿಲ್ಲ ಮತ್ತು ಯಾವುದೇ ದಾಖಲೆಗಳನ್ನು ಪಡೆದಿರುವುದಿಲ್ಲ ಮತ್ತು ಯಾವುದೇ ಸಾಕ್ಷಿದಾರರ ಹೇಳಿಕೆ ಮತ್ತು ಮರು ಹೇಳಿಕೆಯನ್ನು ದಾಖಲಿಸಿಕೊಂಡಿರುವುದಿಲ್ಲ ಮತ್ತು ಎಲ್ಲಾ ದಾಖಲೆಗಳನ್ನು ಈ ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿ ಮಾಡಿ ಆರೋಪಿತನು ಯಾವುದೇ ಅಪರಾಧ ಮಾಡಿಲ್ಲವೆಂದು ಕಂಡುಬಂದಿದ್ದರೂ ಸಹ ಆತನ ವಿರುದ್ಧ ಸುಳ್ಳು ದೋಷಾರೋಪಣಾ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ.</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಕಿರಣ್ ಕಿಣಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ